ಹಾಗೂ ಗದ್ದಿಗೌಡರ್ ಸಮಿತಿಗಳು ಕೆಲವು ತಾಲ್ಲೂಕುಗಳ ರಚನೆಯ ಬಗ್ಗೆ ಮಾಡಿದ ಸೂಚನೆಗಳು ಕೂಡ ಜಾರಿಗೆ ಬರಲಿಲ್ಲ. ಆದರೆ ಇತ್ತೀಚೆಗೆ 2001 ರಲ್ಲಿ ಬೆಂಗಳೂರು ಪೂರ್ವ ತಾಲ್ಲೂಕನ್ನು ಮಾತ್ರ ರಚಿಸಲಾಗಿದೆ.

ಆ) ಸರ್ಕಾರವು ರಾಜ್ಯದಲ್ಲಿ ಹೊಸ ತಾಲ್ಲೂಕುಗಳನ್ನು ರಚಿಸುವ ಬಗ್ಗೆ ಪರಿಶೀಲಿಸುತ್ತಿದೆ. ಈ ಬಗ್ಗೆ ತಜ್ಞರ ಸಮಿತಿಯನ್ನು ನೇಮಿಸಿ ಅದರ ವರದಿ ಬಂದ ನಂತರ ಅದನ್ನು ಸಮಗ್ರವಾಗಿ ಪರಿಶೀಲಿಸಿದ ನಂತರ ಹೊಸ ತಾಲ್ಲೂಕುಗಳ ರಚನೆ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು.

ಇ) ತಜ್ಞರ ಸಮಿತಿಯನ್ನು ನೇಮಿಸಿ ಅದರ ವರದಿ ಬಂದ ನಂತರ ಪರಿಶೀಲಿಸಿ ನಿರ್ಧರಿಸಲಾಗುವುದು.

ಈ) ಮೇಲೆ (ಇ) ನಲ್ಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

1431 ಶ್ರೀ ಲಾಲಾಜಿ ಆರ್. ಮೆಂಡನ್ (ಕಾಪು) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ವಿಸ್ತಾರಗೊಂಡ ಕಾಪು ವಿಧಾನ ಸಭಾ ಕ್ಷೇತ್ರದ ಜನಸಂಖ್ಯೆಯನ್ನು ಕಂದಾಯ ಗ್ರಾಮವಾರು ಜಾತಿವಾರು ಪಟ್ಟಿಯನ್ನು ನೀಡಲಾಗುವುದೆ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ಜಾತಿವಾರು ಪಟ್ಟಿಯನ್ನು ಮಾಡಲಾಗುವುದಿಲ್ಲ. ವಯಸ್ಕರ ಮತದಾರರ ಪಟ್ಟಿಯನ್ನು ಮಾಡಲಾಗುವುದು.

ಕರ್ನಾಟಕ ವಿಧಾನ ಸಭೆ

1044 ಶ್ರೀ ಗೋಪಾಲ ಪೂಜಾರಿ.ಕೆ. :– ಮಾನ್ಯ ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೇಷ್ಮೆ ಇಲಾಖೆಯಲ್ಲಿ 10 ವರ್ಷ ಸೇವೆ ಸಲ್ಲಿಸಿದ್ದ 'ಡಿ' ಮತ್ತು 'ಸಿ' ದರ್ಜೆಯ ನೌಕರರನ್ನು ಖಾಯಂಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;